## ಕರ್ನಾಟಕ ಸರ್ಕಾರದ ನಡವಳಿಗಳು.

ವಿಷಯ:- ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಕೆಲಸಗಳನ್ನು ಡಾ:ಬಿ.ಅರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದ ತಾಲ್ಲೂಕು ಅಭಿವೃದ್ಧಿ ಅಧಿಕಾರಿಗಳು ಹೆಚ್ಚುವರಿಯಾಗಿ ನಿರ್ವಹಿಸುವ ಬಗ್ಗೆ ಆದೇಶ.

ಓದಲಾಗಿದೆ:-ಏಕಕಡತದ ಸಂಖ್ಯೆ:ಕಮವಾಪಪಂಅನಿ:ಸಿಬ್ಬಂದಿ/ಸಿಅರ್/2014-15, ದಿನಾಂಕ:30-05-2014

ಪ್ರಸ್ತಾವನೆ:

ಮೇಲೆ ಓದಲಾದ ಏಕಕಡತದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ನಿಯಮಿತ ಬೆಂಗಳೂರು ಇವರು ನಿಗಮದ ವ್ಯಾಪ್ತಿಯಲ್ಲಿ 16 ಜಿಲ್ಲೆಗಳಲ್ಲಿ ಪ್ರತ್ಯೇಕ ಜಿಲ್ಲಾ ವ್ಯವಸ್ಥಾಪಕ ಕಚೇರಿಗಳು ಕಾರ್ಯ ನಿರ್ವಹಿಸುತ್ತಿದ್ದು, ಇನ್ನುಳಿದ 14 ಜಿಲ್ಲೆಗಳಲ್ಲಿ ಡಾ:ಬಿ.ಅರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದ ವ್ಯವಸ್ಥಾಪಕರೇ ಪರಿಶಿಷ್ಟ ಪಂಗಡದ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುತ್ತಿದ್ದು, ಅವರು ತಾಲ್ಲೂಕು ಅಭಿವೃದ್ಧಿ ಅಧಿಕಾರಿಗಳು ಪರಿಶಿಷ್ಟ ಜಾತಿಯ ಕಾರ್ಯಕ್ರಮಗಳ ಜೊತೆಗೆ ಪರಿಶಿಷ್ಟ ಪಂಗಡದ ಕಾರ್ಯಕ್ರಮಗಳನ್ನು ಸಹ ನಿರ್ವಹಿಸುತ್ತಿರುತ್ತಾರೆ. ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ತಾಲ್ಲೂಕು ಅಭಿವೃದ್ಧಿ ಅಧಿಕಾರಿಗಳ 50 ಹುದ್ದೆಗಳು ಮಂಜೂರಾಗಿದ್ದು, ಖಾಯಂ ತಾಲ್ಲೂಕು ಅಭಿವೃದ್ಧಿ ಅಧಿಕಾರಿಗಳು ಇಲ್ಲದೇ ಕಾರ್ಯಕ್ರಮಗಳ ಅನುಷ್ಠಾನಕ್ಕೆ ತೊಂದರೆಯಾಗಿರುತ್ತದೆ. ಈ ನಿಗಮಕ್ಕೆ ಖಾಯಂ ಆಗಿ ತಾಲ್ಲೂಕು ಅಭಿವೃದ್ಧಿ ಅಧಿಕಾರಿಗಳು ನೇಮಕವಾಗುವವರೆಗೆ ಡಾ:ಬಿ.ಅರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದ ತಾಲ್ಲೂಕು ಅಭಿವೃದ್ಧಿ ಅಧಿಕಾರಿಗಳೇ ಆಯಾ ತಾಲ್ಲೂಕಿನ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡದ ಅಭಿವೃದ್ಧಿ ನಿಗಮದ ಕರ್ತವ್ಯಗಳನ್ನು ಹೆಚ್ಚುವರಿಯಾಗಿ ನಿರ್ವಹಿಸುವಂತೆ ಸೂಚನೆ ನೀಡಿದಲ್ಲಿ ನಿಗಮದ ಕೆಲಸ ತ್ವರಿತ ನಿರ್ವಹಣೆಗೆ ಅನುಕೂಲವಾಗುತ್ತದೆ. ಈ ರೀತಿ ಹೆಚ್ಚುವರಿ ಪ್ರಭಾರದಲ್ಲಿ ಕಾರ್ಯ ನಿರ್ವಹಿಸುವ ಸಿಬ್ಬಂದಿಗೆ ನಿಯಮಾನುಸಾರ ಪ್ರಭಾರ ಭತ್ಯೆಯನ್ನು ಪಾವತಿಸಲಾಗುವುದಾಗಿ ತಿಳಿಸಿ ಈ ಕುರಿತು ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿದ ನಂತರ ಕೆಳಗಿನಂತೆ ಆದೇಶಿಸಲಾಗಿದೆ.

### ಸರ್ಕಾರದ ಆದೇಶ ಸಂಖ್ಯೆ: ಸಕಇ 135 ಎಸ್‌ಡಿಸಿ 2014,
### ಬೆಂಗಳೂರು, ದಿನಾಂಕ:26/06/2014.

ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳ ಹಿನ್ನೆಲೆಯಲ್ಲಿ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಕಾರ್ಯಕ್ರಮಗಳ ಅನುಷ್ಠಾನಗೊಳಿಸುವ ಸಂಬಂಧ ಸದರಿ ನಿಗಮದ ಜಿಲ್ಲಾ ವ್ಯವಸ್ಥಾಪಕರುಗಳ ಕಚೇರಿಗಳು ಪ್ರತ್ಯೇಕವಾಗಿ ಕಾರ್ಯನಿರ್ವಹಿಸುತ್ತಿರುವ ಜಿಲ್ಲೆಗಳ ವ್ಯಾಪ್ತಿಯಲ್ಲಿ ಖಾಯಂ ತಾಲ್ಲೂಕು ಅಭಿವೃದ್ಧಿ ಅಧಿಕಾರಿಗಳು ನೇಮಕವಾಗುವವರೆಗೆ ಹಾಲಿ ಕಾರ್ಯನಿರ್ವಹಿಸುತ್ತಿರುವ ಡಾ:ಬಿ.ಅರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದ ತಾಲ್ಲೂಕು ಅಭಿವೃದ್ಧಿ ಅಧಿಕಾರಿಗಳೇ ಆಯಾ ತಾಲ್ಲೂಕಿನ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಕರ್ತವ್ಯಗಳನ್ನು ಹೆಚ್ಚುವರಿಯಾಗಿ ನಿರ್ವಹಿಸುವಂತೆ ಆದೇಶಿಸಲಾಗಿದೆ.

ಈ ರೀತಿ ಹೆಚ್ಚುವರಿ ಪ್ರಭಾರದಲ್ಲಿ ಕಾರ್ಯನಿರ್ವಹಿಸುವ ಸಿಬ್ಬಂದಿಗೆ ನಿಯಮಾನುಸಾರ ಪ್ರಭಾರ ಭತ್ಯೆಯನ್ನು ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದಿಂದ ಪಾವತಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ.

26/06

(ವಿ.ರತ್ನಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಮಾಜ ಕಲ್ಯಾಣ ಇಲಾಖೆ.

ಗೆ.

1. ಮಹಾಲೇಖಪಾಲರು, (ಎ ಮತ್ತು ಇ, ಲೆಕ್ಕಪರಿಶೋಧನೆ-1 ಮತ್ತು 2), ಕರ್ನಾಟಕ ಬೆಂಗಳೂರು.

2. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು
3. ನಿರ್ದೇಶಕರು, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ, ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ಡಾ. ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು.
5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು.
6. ರಾಜ್ಯ ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
7. ಉಪ ನಿರ್ದೇಶಕರು, ಖಜಾನೆ ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಕೇಂದ್ರ, 2ನೇ ಮಹಡಿ, ಸೌತ್ ಬ್ಲಾಕ್, ಖನಿಜ ಭವನ, ದೇವರಾಜ ಅರಸು ರಸ್ತೆ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ (ವೆಚ್ಚ-3 ಮತ್ತು 9) ಆರ್ಥಿಕ ಇಲಾಖೆ, ವಿಧಾನ ಸೌಧ,
9. ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ,
10. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ,
11. ಸರ್ಕಾರದ ಉಪ ಕಾರ್ಯದರ್ಶಿ-1&2, ಸಮಾಜ ಕಲ್ಯಾಣ ಇಲಾಖೆ,ವಿಕಾಸ ಸೌಧ.
12. ಸರ್ಕಾದ ಅಧೀನಕಾರ್ಯದರ್ಶಿ-1 ಮತ್ತು 2, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ.
13. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.